# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ (ಪವನ ಮತ್ತು ಕಿರು ಜಲ ವಿದ್ಯುತ್) ಸಂಬಂಧಿಸಿದಂತೆ ಒಡಂಬಡಿಕೆಗೆ ಸಹಿ ಮಾಡುವ ಅಧಿಕಾರ ಪ್ರತ್ಯಾಯೋಜನೆ ಬಗ್ಗೆ.

* * *

ಪ್ರಸ್ತಾವನೆ:-

ಅಸಂಪ್ರದಾಯಕ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದನೆಯನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಸರ್ಕಾರವು ಸಾಕಷ್ಟು ಉದ್ದಿಮೆದಾರರಿಗೆ ಖಾಸಗಿ ವಲಯದಲ್ಲಿ ವಿದ್ಯುತ್ ಯೋಜನೆಗಳನ್ನು ಹಂಚಿಕೆ ಮಾಡಿರುತ್ತದೆ / ಮಾಡುತ್ತಿದೆ. ಇತ್ತೀಚಿನ ದಿನಗಳಲ್ಲಿ ಇಂತಹ ಪ್ರಸ್ತಾವನೆಗಳು ಹೆಚ್ಚಾಗುತ್ತಿದೆ. ಅಲ್ಲದೆ, ಅಭಿವೃದ್ಧಿದಾರರಿಗೆ ಮಂಜೂರಾಗಿರುವ ಯೋಜನೆಗಳನ್ನು ಪ್ರಾಥಮಿಕ ಹಂತದಲ್ಲಿ ಅಭಿವೃದ್ಧಿಪಡಿಸಿ ಆನಂತರ ಈ ಯೋಜನೆಗಳನ್ನು ವಿಭಾಗಿಸಿ ವರ್ಗಾವಣೆ ಮಾಡುತ್ತಿರುವುದನ್ನು ಗಮನಿಸಲಾಗಿದೆ. ಯೋಜನೆಗಳ ಮಂಜೂರಾತಿಗೆ, ವರ್ಗಾವಣೆಗೆ ಹಾಗೂ ಯೋಜನಾ ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಪ್ರತಿ ಹಂತದಲ್ಲೂ ಸರ್ಕಾರದಿಂದ ಆದೇಶ ಹೊರಡಿಸಲಾಗುತ್ತಿದ್ದು ನಂತರ ಈ ಆದೇಶಾನುಸಾರ ಅಭಿವೃದ್ಧಿದಾರರು ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುತ್ತಾರೆ. ಈ ಒಡಂಬಡಿಕೆಯನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯು ಪರಿಶೀಲಿಸಿ ಸರ್ಕಾರದ ಅಧೀನ ಕಾರ್ಯದರ್ಶಿಯವರ ಸಹಿಗಾಗಿ ಕಳುಹಿಸಿಕೊಡುತ್ತಿದೆ. ಈ ಒಡಂಬಡಿಕೆಯಲ್ಲಿನ ಷರತ್ತುಗಳ ಅನುಷ್ಠಾನ ಮತ್ತು ಪಾಲನೆಯನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯೇ ನಿರ್ವಹಿಸುತ್ತಿರುವುದರಿಂದ ಈ ಒಡಂಬಡಿಕೆಯ ಅನುಮೋದನೆ / ಸಹಿಯನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಪ್ರಮಾಣೀಕರಿಸುವುದು ಸೂಕ್ತವಾಗಿದೆ. ಇದರಿಂದ ಒಡಂಬಡಿಕೆಯ ಸಂರಕ್ಷಣೆ, ಅನುಷ್ಠಾನದ ಪಾಲನೆಯ ಕಡೆಗೆ ಹೆಚ್ಚು ನಿಗಾವಹಿಸಲು ಸಾಧ್ಯವಾಗುತ್ತದೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 435 ಎನ್‌ಸಿಇ 2011,**
**ಬೆಂಗಳೂರು, ದಿನಾಂಕ: 06.01.2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ (ಪವನ / ಕಿರು ಜಲ ವಿದ್ಯುತ್ ) ಸಂಬಂಧಿಸಿದಂತೆ ಖಾಸಗಿ ಅಭಿವೃದ್ಧಿದಾರರು ಮಾಡಿಕೊಳ್ಳುವ ಎಲ್ಲಾ ಒಡಂಬಡಿಕೆಗೆ ಸಹಿ ಮಾಡುವ ಅಧಿಕಾರವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ರವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸುರೇಶ್.ಬಿ.ಕೃಷ್ಣಪ್ಪನವರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.
ಪ್ರತಿ:

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.: 82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.

......2

3) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು..
4) ವ್ಯವಸ್ಥಾಪಕ ನಿರ್ದೇಶಕರು, ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು.
5) ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕಾವೇರಿ ಭವನ, ಬೆಂಗಳೂರು-9.
6) ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, 6 ಮತ್ತು 7ನೇ ಮಹಡಿ, ಮಹಾಲಕ್ಷ್ಮಿ ಛೇಂಬರ್ಸ್, 9/2, ಎಂ.ಜಿ. ರಸ್ತೆ, ಬೆಂಗಳೂರು-1.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
8) ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11) ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.